ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ ತಾಲ್ಲೂಕು, ದೊಡ್ಡಬಳ್ಳಾಪುರ ತಾಲ್ಲೂಕು ಹಾಗೂ ಬೆಂಗಳೂರು ಉತ್ತರ(ಆಪರ) ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಲ್ಲಿನ ವಿವಿಧ ಗ್ರಾಮಗಳಲ್ಲಿ ರಸ್ತೆ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ರೂ.14,35,13,500-00 ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ

***

1) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇವರ ಪತ್ರ ಸಂಖ್ಯೆ:ಬಿಐಎಎಪಿಎ/ಟಿಪಿ/ಆ.ಆ/ದೇ & ಬೆ.ಗ್ರಾ.ತಾ-01/2010-11, ದಿನಾಂಕ.6-4-2010.

2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇವರ ಪತ್ರ ಸಂಖ್ಯೆ:ಬಿಐಎಎಪಿಎ/ಟಿಪಿ/ಆ.ಆ/ದೂ-01/2010-11, ದಿನಾಂಕ.6-4-2010.

3) 3) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇವರ ಪತ್ರ ಸಂಖ್ಯೆ:ಬಿಐಎಎಪಿಎ/ಟಿಪಿ/ಆ.ಆ/ದೇ-01/2010-11. ದಿನಾಂಕ.6-4-2010.

ಕಾರ್ಯದರ್ಶಿ, EDA

ಮೇಲೆ (1)ರಲ್ಲಿ ಓದಲಾದ ದಿನಾಂಕ.6-4-2010ರ ಪತ್ರದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇವರು ದೇವನಹಳ್ಳಿ ತಾಲ್ಲೂಕು, ದಿನಾಂಕ.31-3-2010ರಂದು ನಡೆದ ಪ್ರಾಧಿಕಾರದ 63ನೇ ಸಭೆಯ ವಿಷಯ ಸಂಖ್ಯೆ:63(11), 63(16) ಮತ್ತು 63(13)ರಲ್ಲಿ 2010-2011ನೇ ಸಾಲಿನ ಆಯವ್ಯಯದಲ್ಲಿ ಸ್ವೀಕೃತವಾಗಬಹುದಾದ ಆದಾಯವನ್ನು ಗಮನದಲ್ಲಿಟ್ಟುಕೊಂಡು ರೂ.15.00 ಕೋಟಿಗಳನ್ನು ರಸ್ತೆ ಮತ್ತಿತರ ಕಾಮಗಾರಿಗಳಿಗಾಗಿ ನಿಗದಿಪಡಿಸಿದ್ದು, ಸದರಿ ಹಣವನ್ನು ದೇವನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ರೂ.6,29,13,500.00 ಮತ್ತು ಬೆಂಗಳೂರು ಉತ್ತರ(ಆಪರ)

ತಾಲ್ಲೂಕಿನ ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ, overhead tank ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗಾಗಿ ರೂ.5.00 ಕೋಟಿ ಸೇರಿದಂತೆ ಒಟ್ಟು ರೂ.11,29,13,500.00 ಕೋಟಿಗಳಿಗೆ ಹಾಗೂ ಉಲ್ಲೇಖ(2)ರಲ್ಲಿ ಓದಲಾದ ದಿನಾಂಕ.6-4-2010ರ ಪತ್ರದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕೈಗೊಳ್ಳಲಾಗುವ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ರೂ.2,50,00,000-00 ಕೋಟಿ ಹಾಗೂ ಉಲ್ಲೇಖ(3)ರಲ್ಲಿ ಓದಲಾದ ದಿನಾಂಕ.6-4-2010ರ ಪತ್ರದಲ್ಲಿ ದೇವನಹಳ್ಳಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅಂಗನವಾಡಿ ಕಟ್ಟಡ ನಿರ್ಮಿಸಲು ರೂ.56,00,000-00 ಲಕ್ಷ ಸೇರಿದಂತೆ ಒಟ್ಟು ರೂ.14,35,13,500.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವನ್ನು ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ:

ಸರ್ಕಾರದ ಆದೇಶ ಸಂಖ್ಯೆ.ನಅಇ 200 ಬಿಎಂಆರ್ 2009, ಬೆಂಗಳೂರು, ದಿನಾಂಕ.9-4-2010.

ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇವರು ದೇವನಹಳ್ಳಿ ತಾಲ್ಲೂಕು, ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ದಿನಾಂಕ.31-3-2010ರಂದು ನಡೆದ ಪ್ರಾಧಿಕಾರದ 63ನೇ ಸಭೆಯ ವಿಷಯ ಸಂಖ್ಯೆ.63(11), 63(16) ಮತ್ತು 63(13)ರಲ್ಲಿ ತೀರ್ಮಾನಿಸಿದಂತೆ 2010-2011ನೇ ಸಾಲಿನ ಆಯವ್ಯಯದಲ್ಲಿ ಲಭ್ಯವಾಗಬಹುದಾದ ರೂ.15.00 ಕೋಟಿಗಳಲ್ಲಿ ರಸ್ತೆ ದೇವನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗಾಗಿ ರೂ.6,29,13,500.00 (ರೂಪಾಯಿ ಆರು ಕೋಟಿ ಇಪ್ಪತ್ತೊಂಭತ್ತು ಲಕ್ಷದ ಹದಿಮೂರು ಸಾವಿರದ ಐನೂರು ಮಾತ್ರ) ಮತ್ತು ಬೆಂಗಳೂರು ಉತ್ತರ(ಆಪರ) ತಾಲ್ಲೂಕಿನ ವ್ಯಾಪ್ತಿಯಲ್ಲಿನ ರಸ್ತೆ ಅಭಿವೃದ್ಧಿ, overhead tank ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗಾಗಿ ರೂ.5.00 ಕೋಟಿ(ರೂಪಾಯಿ ಐದು ಕೋಟಿ ಮಾತ್ರ) ಹಾಗೂ ದೊಡ್ಡಬಳ್ಳಾಪುರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕೈಗೊಳ್ಳಲಾಗುವ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ರೂ.2,50,00,000-00 ಕೋಟಿ (ರೂಪಾಯಿ ಎರಡು ಕೋಟಿ ಐವತ್ತು ಲಕ್ಷ ಮಾತ್ರ) ದೇವನಹಳ್ಳಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅಂಗನವಾಡಿ

ಒಟ್ಟು ನಿರ್ಮಾಣದ ರೂ.56,00,000-00 (ರೂಪಾಯಿ ಐವತ್ತಾರು ಲಕ್ಷ ಮಾತ್ರ)ಲಕ್ಷ ಸೇರಿದಂತೆ ಒಟ್ಟು ರೂ.14,35,13,500.00 ಕೋಟಿಗಳಿಗೆ(ರೂಪಾಯಿ ಹದಿನಾಲ್ಕು ಕೋಟಿ ಮೂವತ್ತೈದು ಲಕ್ಷದ ಹದಿಮೂರು ಸಾವಿರದ ಐನೂರು ಮಾತ್ರ) ಆಡಳಿತಾತ್ಮಕ ಅನುಮೋದನೆಯನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಿದೆ:-

(1) ಮೇಲಿನ ಕಾಮಗಾರಿಗೆ ತಗಲುವ ಸಂಪೂರ್ಣ ವೆಚ್ಚವನ್ನು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ, ಇಲ್ಲಿ ಲಭ್ಯವಿರುವ ಹಣದಿಂದ ಭರಿಸುವುದು;

(2) ಸರ್ಕಾರದಿಂದ ಈ ಕಾಮಗಾರಿಗಳಿಗಾಗಿ ಯಾವುದೇ ಹಣವನ್ನು ನೀಡಲಾಗುವುದಿಲ್ಲ;

(3) ಕೆ.ಟಿ.ಪಿ.ಪಿ.ಕಾಯ್ದೆ ಮತ್ತು ನಿಯಮಗಳನ್ವಯ ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳುವುದು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಎಸ್.ಕೋಣಕಾರಾಧ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.

ಇವರಿಗೆ:-
1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2) ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ.
3)ಅಧ್ಯಕ್ಷರು, ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ,

ಪ್ರತಿ:-
1) ಸರ್ಕಾರದ ವಿಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
2) ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.